# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916

(4ನೇ ಆವೃತ್ತಿಯ ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)

(ಎನ್‌ಐಆರ್‌ಎಫ್-2024: ವಿಶ್ವವಿದ್ಯಾನಿಲಯ ವರ್ಗದಲ್ಲಿ 54ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 86ನೇ ಸ್ಥಾನವನ್ನು ಹೊಂದಿದೆ)



ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ,ಮೈಸೂರು-570005


ಸಂಖ್ಯೆ:ಪವಿ/8.1/ಪಿ.ಜಿ.ಬಿ/75/2009-10 (1) ದಿನಾಂಕ: 07-10-2026

## ಅಧಿಸೂಚನೆ

ವಿಷಯ: ನವೆಂಬರ್-2026ರಲ್ಲಿ ಜರುಗಲಿರುವ 7ನೇ ಸೆಮಿಸ್ಟರ್ M.Sc.Ed, (RIE) ಸ್ನಾತಕೋತ್ತರ ಪದವಿ ಪರೀಕ್ಷೆಯ ಬಗ್ಗೆ.

ಉಲ್ಲೇಖ: ವಿ.ವಿ. ಅಧಿಸೂಚನೆ ಸಂಖ್ಯೆ: AC6/10/2024-25, ದಿನಾಂಕ: 16-07-2026.

******

ನವೆಂಬರ್-2026ರ ಮಾಹೆಯಲ್ಲಿ ನಡೆಯಲಿರುವ 7ನೇ ಸೆಮಿಸ್ಟರ್ M.Sc.Ed, (RIE) ಸ್ನಾತಕೋತ್ತರ ಪದವಿ ಪರೀಕ್ಷೆ ಸಂಬಂಧದ ವೇಳಾಪಟ್ಟಿ ಹಾಗೂ ಪರೀಕ್ಷಾ ಶುಲ್ಕದ ಮಾಹಿತಿಗಳು ಕೆಳಕಂಡಂತಿರುತ್ತದೆ;

| ಕ್ರ.ಸಂ. | ವಿವರಗಳು | ಅಂತಿಮ ದಿನಾಂಕ |
|---|---|---|
| 1 | ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕಗಳನ್ನು ಆನ್‌ಲೈನ್ ಮುಖಾಂತರ ಪಾವತಿಸಿ ಹಾಗೂ ಶುಲ್ಕ ಪಾವತಿಸಿದ ನಂತರ ಪರೀಕ್ಷಾ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು (ವಿದ್ಯಾರ್ಥಿಗಳು UUCMS ಅಡಿಯಲ್ಲಿ ಪರೀಕ್ಷಾ ಶುಲ್ಕಗಳನ್ನು ಪಾವತಿಸುವ ಸಂದರ್ಭದಲ್ಲಿ ತಮ್ಮ ಕೋರ್ಸಿನ ಪತ್ರಿಕೆಗಳನ್ನು ಪರಿಶೀಲಿಸಿ ಆಯ್ಕೆ ಮಾಡಿಕೊಳ್ಳುವುದು). | 22-10-2026 |
| 2 | ರೂ.100/-ಗಳ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ಕಡೆಯ ದಿನಾಂಕ (1st penalty) | 23-10-2026 |
| 3 | ರೂ.200/-ಗಳ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ಕಡೆಯ ದಿನಾಂಕ (2nd penalty) | 24-10-2026 |
| 4 | ಪ್ರವೇಶ ಪತ್ರಗಳ ಮುದ್ರಣದ ನಂತರ ಈ ಕಛೇರಿಗೆ ವಿದ್ಯಾರ್ಥಿಗಳು ಪಾವತಿಸಿರುವ ಪರೀಕ್ಷಾ ಶುಲ್ಕಗಳ ಮಾಹಿತಿಯನ್ನು ಕ್ರೋಢಿಕರಿಸಿ ಈ ಕಛೇರಿಗೆ ಸಲ್ಲಿಸುವ ದಿನಾಂಕ | 27-10-2026 |
| 5 | ವೇಳಾಪಟ್ಟಿ ಮತ್ತು ಪ್ರಶ್ನೆಪತ್ರಿಕೆ ಬೇಡಿಕೆ ಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಅಂತಿಮ ದಿನಾಂಕ | 29-10-2026 |
| 6 | $C_1$ & $C_2$ (continuous assessment) ಅಂಕಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಹಾಗೂ ಹಾಜರಾತಿಯನ್ನು ಅಪ್‌ಲೋಡ್ ಮಾಡುವ ದಿನಾಂಕ | 05-11-2026 |
| 7 | ಲಿಖಿತ ಪರೀಕ್ಷೆ ಪ್ರಾರಂಭವಾಗುವ ದಿನಾಂಕ | 19-11-2026 |

**ಸೂಚನೆಗಳು:**

1. 7ನೇ ಸೆಮಿಸ್ಟರ್‌ನ ಪರೀಕ್ಷಾ ಕಾರ್ಯಗಳು UUCMS ಅಡಿಯಲ್ಲಿ ಬರುವುದರಿಂದ ಕಾಲೇಜಿನ ವತಿಯಿಂದ "academic moduleನಲ್ಲಿ curiculam mapping" ಮಾಡಿದ ನಂತರ, ವಿದ್ಯಾರ್ಥಿಗಳು ಆನ್‌ಲೈನ್ (UUCMS) ಮೂಲಕ ಪತ್ರಿಕೆಗಳನ್ನು ಆಯ್ಕೆ ಮಾಡಿಕೊಂಡು "mapping" ಮಾಡಲು ಕಾಲೇಜಿನವರು QP Code/Course Code ಗಳನ್ನು ನೀಡಬೇಕು ಹಾಗೂ ಆನ್‌ಲೈನ್ ಮೂಲಕ ಪರೀಕ್ಷಾ ಶುಲ್ಕ ಪಾವತಿಸಲು ಮಾರ್ಗದರ್ಶನ ನೀಡುವುದು.

2. ಎಲ್ಲಾ ಪ್ರಾಯೋಗಿಕ ಪರೀಕ್ಷೆಗಳನ್ನು ಲಿಖಿತ ಪರೀಕ್ಷೆಗಳ ನಂತರ ಪೂರ್ಣಗೊಳಿಸುವುದು. ಸದರಿ ಪರೀಕ್ಷೆಗೆ ಬಾಹ್ಯ ಪರೀಕ್ಷಕರು **(External Examiners)** ಲಭ್ಯವಾಗದ ಸಂದರ್ಭದಲ್ಲಿ ಆಂತರಿಕ ಪರೀಕ್ಷಕರನ್ನೇ **(Internal Examiners)** ಬಳಸಿಕೊಂಡು ಪರೀಕ್ಷೆ ನಡೆಸುವುದು.

3. ಪ್ರಾಯೋಗಿಕ ಪರೀಕ್ಷೆಗಳು ಮುಗಿದ ನಂತರ ಆ ದಿನದಂದೇ **online ಮುಖಾಂತರ ಅಂಕಗಳನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಅಂಕಗಳ ಮೂಲ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸುವುದು.**

4. ಕಾಲೇಜಿನ ಆಡಳಿತ ವರ್ಗ ಹಾಗೂ ಸಿಬ್ಬಂದಿ, ವಿದ್ಯಾರ್ಥಿಗಳು ಭರ್ತಿ ಮಾಡಿದ ವಿಷಯಗಳ ಆಯ್ಕೆ (subject selection) ಹಾಗೂ ಪರೀಕ್ಷಾ ಅರ್ಜಿಗಳಲ್ಲಿ ನ್ಯೂನ್ಯತೆಗಳಿದ್ದರೆ, (ಪ್ರವೇಶ ಪತ್ರಿಕೆಗಳ ಮುದ್ರಣಕ್ಕೆ ಸಂಬಂಧಿಸಿದಂತೆ, ಪ್ರಾಂಶುಪಾಲರ ಅನುಮೋದನೆ ಪಡೆಯುವ ಮೊದಲು ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಂಡಿರುವ ಪತ್ರಿಕೆಗಳನ್ನು ಪುನಃ ಪರಿಶೀಲಿಸಿಕೊಳ್ಳುವುದು, ಇಲ್ಲದಿದ್ದರೆ ಕಾಲೇಜಿನ ಪ್ರಾಂಶುಪಾಲರು ಇಂತಹ ತಪ್ಪುಗಳಿಗೆ ಹೊಣೆಗಾರರಾಗಿರುತ್ತಾರೆ.

**ಪರೀಕ್ಷಾ ಶುಲ್ಕಗಳು:**

**Examination Fee for Odd Semester M.Sc.Ed, (RIE Scheme)**

| | | |
|---|---|---|
| i) Whole Exam (per exam) | : | Rs. 2565=00 |
| ii) Per Paper with Practical | : | Rs. 2230=00 |
| iii) Per Paper without Practical | : | Rs. 1770=00 |

***Subject to a maximum of whole examination Fee fixed per semester.***

**ವಿಶೇಷ ಸೂಚನೆಗಳು:**

1. **ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.**
2. ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕಗಳಲ್ಲಿ Zero Payment ಪಡೆಯಲು ಅರ್ಹರಾಗಿದ್ದಾರೆ. UUCMS Portal ಮುಖಾಂತರ Student Login ನಲ್ಲಿ ಪರೀಕ್ಷಾ ಅರ್ಜಿಯನ್ನು ಕಡ್ಡಾಯವಾಗಿ Submit ಮಾಡುವುದು. ಒಂದು ವೇಳೆ Zero Payment ಎಂದು ಅರ್ಜಿಯನ್ನು Submit ಮಾಡದೇ ಹೋದಲ್ಲಿ ಪ್ರವೇಶ ಪತ್ರವು (Hall Ticket) ಬರುವುದಿಲ್ಲ. ಆದ್ದರಿಂದ Student Login ನಲ್ಲಿ ಪರೀಕ್ಷಾ ಅರ್ಜಿಯು Submit ಆಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವುದು. ಇದನ್ನು ಸಂಬಂಧಪಟ್ಟ ಕಾಲೇಜಿನ ಮುಖ್ಯಸ್ಥರು / ಅಧೀಕ್ಷಕರು / ಗುಮಾಸ್ತರು ಕೂಡ ವಿದ್ಯಾರ್ಥಿಗಳ ಗಮನಕ್ಕೆ ತರುವುದು. ಇದಕ್ಕೆ ವಿಶ್ವವಿದ್ಯಾನಿಲಯವು ಜವಾಬ್ದಾರವಾಗಿರುವುದಿಲ್ಲ. ಪರೀಕ್ಷಾ ಅರ್ಜಿಯನ್ನು Submit ಮಾಡದಿದಲ್ಲಿ ಇತರೇ ವಿದ್ಯಾರ್ಥಿಗಳಿಗೆ ವಿಧಿಸಲ್ಪಡುವ ದಂಡಶುಲ್ಕವು ಈ ವಿದ್ಯಾರ್ಥಿಗಳಿಗೂ ಅನ್ವಯವಾಗುತ್ತದೆ.
3. **ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ಆದಾಯ ರೂ.2.5 ಲಕ್ಷಗಳು ಮೀರಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸುವುದು. ಪ್ರವರ್ಗ-1 ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಸಹ ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸುವುದು.**
4. ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಆಯಾಯ ಕಾಲೇಜಿನವರು ಪರೀಕ್ಷೆಗಳು ಪ್ರಾರಂಭವಾಗುವುದಕ್ಕೆ ಸಾಕಷ್ಟು ಮುಂಚಿತವಾಗಿ online ಮೂಲಕ ಪ್ರಿಂಟ್ ಪಡೆದು, ಕುಲಸಚಿವರು (ಪರೀಕ್ಷಾಂಗ) ಇವರ ಯಥಾಪ್ರತಿ (Facsimile) ಹಾಕಿಸಿಕೊಳ್ಳಬೇಕು ಮತ್ತು ಕುಲಸಚಿವ (ಪರೀಕ್ಷಾಂಗ) ಅವರ ಯಥಾಪ್ರತಿ (Facsimile) ಇಲ್ಲದೆ ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಅವಕಾಶವಿರುವುದಿಲ್ಲ.

**ವಿದ್ಯಾರ್ಥಿಗಳಿಗೆ ಸೂಚನೆಗಳು:**

1. ಲಿಖಿತ ಪರೀಕ್ಷೆಗಳಿಗೆ ಸಂಬಂಧಪಟ್ಟ ವಿವರವಾದ ವೇಳಾಪಟ್ಟಿಯನ್ನು ಈ ಕಛೇರಿಯಿಂದ ಮುಂದಿನ ದಿನಗಳಲ್ಲಿ ಕಳುಹಿಸಲಾಗುವುದು.
2. ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಮತ್ತು ಅದನ್ನು ಮುಂದಿನ ಪರೀಕ್ಷೆಗಳಿಗೂ ಸರಿದೂಗಿಸಿಕೊಳ್ಳಲಾಗುವುದಿಲ್ಲ.

3. **ಭಾವಚಿತ್ರಗಳಿಲ್ಲದ ಹಾಗೂ ಕುಲಸಚಿವರು (ಪರೀಕ್ಷಾಂಗ) ಅಥವಾ ಪ್ರಾಂಶುಪಾಲರ ಸಹಿ/ಮೊಹರು ಇಲ್ಲದ ಪ್ರವೇಶಪತ್ರಗಳನ್ನು ಪರೀಕ್ಷಾ ಕೊಠಡಿಯಲ್ಲಿ ಹಾಜರುಪಡಿಸುವ ವಿದ್ಯಾರ್ಥಿಗಳಿಗೆ ಯಾವುದೇ ಕಾರಣಕ್ಕೂ ಕೇಂದ್ರದ ಪರೀಕ್ಷಾ ಮುಖ್ಯಾಧಿಕಾರಿಗಳು/ವಿಶ್ವವಿದ್ಯಾನಿಲಯದ ಅಧಿಕಾರಿಗಳು ಹಾಗೂ ತನಿಖಾಧಿಕಾರಿಗಳು ಪರೀಕ್ಷೆ ತೆಗೆದುಕೊಳ್ಳಲು ಅನುಮತಿ ಕೊಡುವುದಿಲ್ಲ.**

**ಪ್ರಾಂಶುಪಾಲರಿಗೆ ಸಾಮಾನ್ಯ ಸೂಚನೆಗಳು:**

1. ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಮಾಹಿತಿಯನ್ನು Online ಮೂಲಕ ಎಂಟ್ರಿ ಮಾಡಿದ ನಂತರ ಕಾಲೇಜು ಹಂತದಲ್ಲಿಯೇ ಪ್ರವೇಶ ಪತ್ರಗಳನ್ನು ಮುದ್ರಿಸುವ ವ್ಯವಸ್ಥೆಯನ್ನು ಮಾಡಲಾಗುವುದು. ವಿದ್ಯಾರ್ಥಿಗಳ ಹಾಜರಾತಿ ಮತ್ತು ಪ್ರವೇಶಾತಿ ಅನುಮತಿಯನ್ನು ಪ್ರವೇಶ ಪತ್ರದಲ್ಲಿ ದೃಢೀಕರಿಸಿದ ನಂತರ ಕುಲಸಚಿವ(ಪರೀಕ್ಷಾಂಗ) ಅವರ ಮೇಲುಸಹಿಗಾಗಿ ಪರೀಕ್ಷೆ ಪ್ರಾರಂಭಕ್ಕಿಂತ ಮುಂಚಿತವಾಗಿ ಕಳುಹಿಸಬೇಕು.
2. ಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಮೊಹರು ಮಾಡಿದ ಕವರುಗಳಲ್ಲಿ ಇಟ್ಟು ಕೇಂದ್ರದಲ್ಲಿ ನಡೆಯುವ ಎಲ್ಲಾ ವಿಷಯಗಳ ಪ್ರಾಯೋಗಿಕ (ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ಮುನ್ನ) ಪರೀಕ್ಷೆಗಳು ಮುಗಿದ ಮರು ದಿನವೇ ಕಳುಹಿಸಬೇಕು.
3. ಅಂಕಪಟ್ಟಿಗಳನ್ನು ಕಳುಹಿಸುವಂತಹ ಕಾಲೇಜುಗಳಿಗೆ/ಸಂಸ್ಥೆಗಳಿಗೆ ಸೇರಿದ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶಗಳು ತಡವಾಗಿ ಪ್ರಕಟವಾಗುವ ಸಂಭವವನ್ನು ತಪ್ಪಿಸಲು ಜಾಗರೂಕರಾಗಿರಲು ಕೋರಲಾಗಿದೆ. ಉತ್ತರ ಪತ್ರಿಕೆಗಳ ಕಟ್ಟುಗಳಲ್ಲಿ (Answer Book Bundles) ಅಂಕಪಟ್ಟಿಗಳನ್ನು ಕಳುಹಿಸಬಾರದೆಂದು ಸೂಚಿಸಲಾಗಿದೆ. ಅಂಕಪಟ್ಟಿಗಳನ್ನು ತಯಾರಿಸುವಾಗ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು (Register Number) ಪೂರ್ಣವಾಗಿ ಬರೆಯಬೇಕೆಂಬ ವಿಚಾರವನ್ನು ಎಲ್ಲಾ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು ಹಾಗೂ ಸಂಬಂಧಪಟ್ಟ ಪ್ರಾಯೋಗಿಕ ಪತ್ರಿಕೆಯ ನಿಖರವಾದ ಕೋಡ್ ನಂಬರನ್ನು ತಪ್ಪದೆ ಬರೆಯಬೇಕೆಂಬ ವಿಚಾರವನ್ನು ಸಹ ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು. ಪ್ರಾಯೋಗಿಕ ಪರೀಕ್ಷಕರಿಗೆ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು (Marks List) ಒದಗಿಸುವುದಕ್ಕಿಂತ ಮೊದಲು ಆಯಾಯಾ ಕೇಂದ್ರದ ಮೊಹರನ್ನು (Seal) ಮಾರ್ಕ್ಸ್ ಲಿಸ್ಟ್‌ನ ಕೆಳಗಡೆ ಮಧ್ಯಭಾಗದಲ್ಲಿ ತಪ್ಪದೆ ಹಾಕಬೇಕು.
4. ವಿದ್ಯಾರ್ಥಿಗಳು ಗೈರುಹಾಜರಾದಲ್ಲಿ ಆ ಪರೀಕ್ಷಾ ದಿನದಂದೇ ಆನ್‌ಲೈನ್ ಮುಖಾಂತರ ಗೈರುಹಾಜರಿಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

ಕುಲಸಚಿವ (ಪರೀಕ್ಷಾಂಗ)

**ಇವರಿಗೆ:**

1. ಪ್ರಾಂಶುಪಾಲರು, ಪ್ರಾದೇಶಿಕ ಶಿಕ್ಷಣ ಸಂಸ್ಥೆ (RIE), ಮಾನಸಗಂಗೋತ್ರಿ, ಮೈಸೂರು.
2. ಕುಲಸಚಿವರು/ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಉಪ ಕುಲಸಚಿವರು/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಉಪ ಕುಲಸಚಿವರು, ಪರೀಕ್ಷಾ ಸುಧಾರಣಾ ಘಟಕ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಕುಲಸಚಿವರು(ಪರೀಕ್ಷಾಂಗ), ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಸಂಬಂಧಪಟ್ಟ ನಿರ್ವಾಹಕರು, ಪ.ವಿ.8.9,/1.7, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ (ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು,
8. ಕಛೇರಿ ಪ್ರತಿ.

**ವಿದ್ಯಾರ್ಥಿಗಳು Course Registration** ಮಾಡುವ ಸಂದರ್ಭದಲ್ಲಿ ತಾವು ಆಯ್ಕೆ ಮಾಡುವ ವಿಷಯಗಳನ್ನು